# All India Radio: Bangalore
# National Bulletin In Kannada
# 22.05.2025  7.35 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><><><>

ಮುಖ್ಯಾಂಶಗಳು

೧. ಭಾರತ-ಪಾಕಿಸ್ತಾನ ನಡುವಿನ ಯಾವುದೇ ಒಪ್ಪಂದವು ದ್ವಿಪಕ್ಷೀಯವಾಗಿರಬೇಕು ಭಾರತ ಪುನರುಚ್ಚಾರ

೨. ಇಂದು ಪ್ರಧಾನಿ ನರೇಂದ್ರ ಮೋದಿ ಅವರಿಂದ ವರ್ಚುವಲ್ ಮೂಲಕ ಕಾಮಗಾರಿ ಪೂರ್ಣಗೊಂಡ ೧೦೩ ರೈಲ್ವೆ ನಿಲ್ದಾಣಗಳ ಲೋಕಾರ್ಪಣೆ

೩. ಭಾರತದ ಪ್ರಾಚೀನ ಜ್ಞಾನ ವ್ಯವಸ್ಥೆಗಳ ಮೌಲ್ಯೀಕರಣ, ಡಿಜಿಟಲೀಕರಣ ಅಗತ್ಯ - ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್

೪. ವಾಷಿಂಗ್ಟನ್ ಡಿ.ಸಿ.ಯಲ್ಲಿ ಇಸ್ರೇಲಿ ರಾಜತಾಂತ್ರಿಕರ ಹತ್ಯೆ - ಭಾರತ ಖಂಡನೆ

<><><><>

ಭಾರತ-ಪಾಕಿಸ್ತಾನ ನಡುವಿನ ಯಾವುದೇ ಒಪ್ಪಂದವು ದ್ವಿಪಕ್ಷೀಯವಾಗಿರಬೇಕು ಎಂಬ ತನ್ನ ನಿಲುವನ್ನು ಭಾರತ ಇಂದು ಪುನರುಚ್ಚರಿಸಿದೆ.

ನವದೆಹಲಿಯಲ್ಲಿ ಇಂದು ಮಧ್ಯಾಹ್ನ ಮಾಧ್ಯಮಗಳಿಗೆ ಮಾಹಿತಿ ನೀಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಮಾತುಕತೆ ಮತ್ತು ಭಯೋತ್ಪಾದನೆ ಒಟ್ಟಿಗೆ ಸಾಗಲು ಸಾಧ್ಯವಿಲ್ಲ ಎಂದು ಹೇಳಿದರು.

ಕೆಲವು ವರ್ಷಗಳ ಹಿಂದೆ ಪಾಕಿಸ್ತಾನಕ್ಕೆ ನೀಡಲಾದ ಪಟ್ಟಿಯಲ್ಲಿರುವ ಕುಖ್ಯಾತ ಭಯೋತ್ಪಾದಕರನ್ನು ಭಾರತಕ್ಕೆ ಹಸ್ತಾಂತರಿಸುವ ಬಗ್ಗೆ ಚರ್ಚಿಸಲು ನವದೆಹಲಿ ಮುಕ್ತವಾಗಿದೆ ಎಂದು ಅವರು ಹೇಳಿದರು.

ಜಮ್ಮು ಮತ್ತು ಕಾಶ್ಮೀರದ ಕುರಿತಾದ ಯಾವುದೇ ದ್ವಿಪಕ್ಷೀಯ ಚರ್ಚೆಯು ಪಾಕಿಸ್ತಾನವು ಅಕ್ರಮವಾಗಿ ಆಕ್ರಮಿಸಿಕೊಂಡಿರುವ ಭಾರತೀಯ ಪ್ರದೇಶವನ್ನು ತೊರೆದ ನಂತರ ಮಾತ್ರ ನಡೆಯಲಿದೆ ಎಂದು ಅವರು ಒತ್ತಿ ಹೇಳಿದರು. ಸಿಂಧೂ ಜಲ ಒಪ್ಪಂದದ ಕುರಿತು, ಪಾಕಿಸ್ತಾನವು ಗಡಿಯಾಚೆಗಿನ ಭಯೋತ್ಪಾದನೆಗೆ ತನ್ನ ಬೆಂಬಲವನ್ನು ವಿಶ್ವಾಸಾರ್ಹವಾಗಿ ಮತ್ತು ಬದಲಾಯಿಸಲಾಗದಂತೆ ತ್ಯಜಿಸುವವರೆಗೆ ಅದು ಸ್ಥಗಿತಗೊಳ್ಳುತ್ತದೆ ಎಂದು ವಕ್ತಾರರು ಹೇಳಿದರು.

<><><><>

ದೇಶದಲ್ಲಿ ಕಾಮಗಾರಿ ಪೂರ್ಣಗೊಂಡ ಕರ್ನಾಟಕದ ೫ ರೈಲ್ವೆ ನಿಲ್ದಾಣಗಳು ಸೇರಿದಂತೆ ದೇಶದ ೧೦೩ ರೈಲ್ವೆ ನಿಲ್ದಾಣಗಳನ್ನು ಪ್ರಧಾನಿ ನರೇಂದ್ರ ಮೋದಿ ಇಂದು ವರ್ಚುವಲ್ ಮೂಲಕ ಲೋಕಾರ್ಪಣೆ ಮಾಡಿದರು.

ಒಂದು ಸಾವಿರದ ನೂರು ಕೋಟಿ ರೂಪಾಯಿ ವೆಚ್ಚದಲ್ಲಿ ೧೮ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ೮೬ ಜಿಲ್ಲೆಗಳಲ್ಲಿ ಈ ರೈಲ್ವೈ ನಿಲ್ದಾಣಗಳನ್ನು ಅಭಿವೃದ್ಧಿ ಪಡಿಸಲಾಗಿದೆ.

ರಾಜಸ್ಥಾನದ ಬಿಕಾನೇರ್‌ನಲ್ಲಿ ನಡೆದ ಸಮಾರಂಭದಲ್ಲಿ ಅವರು ಅಭಿವೃದ್ಧಿಪಡಿಸಿದ ನೂತನ ರೈಲ್ವೆ ನಿಲ್ದಾಣಗಳನ್ನು ಸಾರ್ವಜನಿಕ ಸೇವೆಗೆ ಸಮರ್ಪಿಸಿದರು. ನೈರುತ್ಯ ರೈಲ್ವೆ ವಿಭಾಗದ ಧಾರವಾಡ, ಗದಗ, ಬಾಗಲಕೋಟೆ, ಗೋಕಾಕ ಮತ್ತು ಮುನಿರಾಬಾದ್ ಸೇರಿದಂತೆ ವಿವಿಧ ರೈಲ್ವೆ ನಿಲ್ದಾಣಗಳನ್ನು ಅಮೃತ ಭಾರತ ಸ್ಟೇಷನ್ ಯೋಜನೆಯಡಿ ಪುನಾರಾಭಿವೃದ್ಧಿಗೊಳಿಸಲಾಗಿದೆ. ಪ್ರಧಾನಿ ನರೇಂದ್ರಮೋದಿ ಮಾತಾನಾಡಿ, ನಮ್ಮ ದೇಶದ ವಿಮಾನ ನಿಲ್ದಾಣಗಳು, ಬಂದರುಗಳು ಅಭಿವೃದ್ಧಿಗೊಂಡಿವೆ ಎಂದು ಅವರು ಹೇಳಿದರು.

ಇದೇ ರೀತಿಯಲ್ಲಿ ರೈಲ್ವೆ ನಿಲ್ದಾಣಗಳು ಸಹ ಪುನಶ್ಚೇತನಗೊಳ್ಳುತ್ತಿವೆ. ಹಿಂದಿನ ಸರ್ಕಾರಕ್ಕೆ ಹೋಲಿಸಿದರೆ ನಾವು ಆರು ಪಟ್ಟು ಹೆಚ್ಚು ಹಣವನ್ನು ರೈಲ್ವೆ ಅಭಿವೃದ್ಧಿಗೆ ಬಳಸುತ್ತಿದ್ದೇವೆ. ವಂದೇಭಾರತ್, ನಮೋ ಭಾರತ್ ರೈಲುಗಳು ಆಧುನಿಕತೆಯ ಪ್ರತೀಕವಾಗಿವೆ. ರೈಲ್ವೆ ಮೂಲ ಸೌಕರ್ಯ ಹೆಚ್ಚಿಸಿದ್ದು, ಮಾನವ ರಹಿತ ರೈಲ್ವೆ ಕ್ರಾಸಿಂಗ್ ವ್ಯವಸ್ಥೆಯನ್ನು ಜಾರಿಗೊಳಿಸಿದ್ದೇವೆ. ಬುಲೆಟ್ ರೈಲು ಸೇವೆಗೆ ಒಂದು ವರ್ಷದಲ್ಲಿ ಚಾಲನೆ ನೀಡಲಾಗುವುದು ಎಂದು ಪ್ರಧಾನಿ ಹೇಳಿದರು.

ಧ್ವನಿ: ಪ್ರಧಾನಿ ನರೇಂದ್ರಮೋದಿ

೨೨.೦೫.೨೦೨೫ ರಾಷ್ಟ್ರೀಯ ವಾರ್ತೆಗಳು ೧೯.೩೫ ರೈಲ್ವೆ ನಿಲ್ದಾಣ ಲೋಕಾರ್ಪಣೆ-೨

ದೇಶದಲ್ಲಿ ಮೂಲ ಸೌಕರ್ಯ ಅಭಿವೃದ್ಧಿ ನಿರಂತರವಾಗಿ ಸಾಗುತ್ತಿದ್ದು ಇದರಿಂದ ಉದ್ಯೋಗವಕಾಶಗಳು ಹೆಚ್ಚಾಗಿವೆ. ಸೂರ್ಯಘರ್ ಯೋಜನೆಯಿಂದ ಉಚಿತ ವಿದ್ಯುತ್ ದೊರೆಯುತ್ತಿದೆ ಎಂದರು. ಪೆಹಲ್ಗಾಮ್ ಭಯೋತ್ಪಾದಕ ದಾಳಿಗೆ ಭಾರತದ ವೀರಯೋಧರು ನೀಡಿದ ಉತ್ತರಕ್ಕೆ ಪ್ರದಾನಿ ನರೇಂದ್ರಮೋದಿ ಮೆಚ್ಚುಗೆ ವ್ಯಕ್ತಪಡಿಸಿದರು. ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮಾತಾನಾಡಿ, ಪ್ರಧಾನಿ ನರೇಂದ್ರಮೋದಿ ನೇತೃತ್ವದ ಸರ್ಕಾರ ರೈಲ್ವೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಿದೆ. ರೈಲ್ವೆ ವಲಯಕ್ಕೆ ಹೊಸ ಸ್ವರೂಪ ಮತ್ತು ಹೊಸ ಸ್ಪರ್ಶ ನೀಡಿದೆ ಎಂದು ತಿಳಿಸಿದ್ದಾರೆ.

<><><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಇಂದು ಭಾರತದ ಪ್ರಾಚೀನ ಜ್ಞಾನ ವ್ಯವಸ್ಥೆಗಳನ್ನು ಪುರಾವೆ ಆಧಾರಿತ ಮೌಲ್ಯೀಕರಣ, ಡಿಜಿಟಲೀಕರಣ, ಅನುವಾದಗಳು ಮತ್ತು ಅಂತರ-ಶಿಸ್ತಿನ ಅಧ್ಯಯನಗಳ ಮೂಲಕ ಪುನರುಜ್ಜೀವನಗೊಳಿಸುವ ಮಹತ್ವವನ್ನು ಒತ್ತಿ ಹೇಳಿದರು.

ಗೋವಾದ ರಾಜಭವನದಲ್ಲಿ ಚರಕ ಮತ್ತು ಸುಶ್ರುತ ಅವರ ಪ್ರತಿಮೆಗಳನ್ನು ಅನಾವರಣಗೊಳಿಸಿದ ನಂತರ ಮಾತನಾಡಿದ ಅವರು, ಸಾಂಪ್ರದಾಯಿಕ ಪಠ್ಯಗಳನ್ನು ಸಮಕಾಲೀನ ಸವಾಲುಗಳಿಗೆ ಸುಲಭವಾಗಿ ಮತ್ತು ಪ್ರಸ್ತುತವಾಗಿಸುವ ಅಗತ್ಯವನ್ನು ಅವರು ಒತ್ತಿ ಹೇಳಿದರು.

<><><>

ವಾಷಿಂಗ್ಟನ್ ಡಿ.ಸಿ.ಯಲ್ಲಿ ಇಸ್ರೇಲಿ ರಾಜತಾಂತ್ರಿಕರ ಹತ್ಯೆಯನ್ನು ಭಾರತ ಇಂದು ತೀವ್ರವಾಗಿ ಖಂಡಿಸಿದೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್, ದುಷ್ಕರ್ಮಿಗಳನ್ನು ಶಿಕ್ಷೆಗೆ ಒಳಪಡಿಸಬೇಕು ಎಂದು ಹೇಳಿದ್ದಾರೆ. ಮೃತರ ಕುಟುಂಬಗಳು ಮತ್ತು ಸಹೋದ್ಯೋಗಿಗಳಿಗೆ ಅವರು ಸಂತಾಪ ಸೂಚಿಸಿದ್ದಾರೆ.

<><><>

ಪಾಕಿಸ್ತಾನ ಪ್ರಾಯೋಜಿತ ಭಯೋತ್ಪಾದನೆಯನ್ನು ಮತ್ತಷ್ಟು ಅನಾವರಣಗೊಳಿಸುವ ಭಾರತದ ಆಕ್ರಮಣಕಾರಿ ಜಾಗತಿಕ ಅಭಿಯಾನದಡಿಯಲ್ಲಿ ಎರಡು ಸಂಸದೀಯ ನಿಯೋಗಗಳು ತಮ್ಮ ನಿಗದಿತ ಪ್ರವಾಸದಲ್ಲಿ ತೊಡಗಿವೆ. ಜೆಡಿಯು ಸಂಸದ ಸಂಜಯ್ ಕುಮಾರ್ ಝಾ ನೇತೃತ್ವದ ಸರ್ವಪಕ್ಷ ಸಂಸದೀಯ ನಿಯೋಗ ಜಪಾನ್ ತಲುಪಿದ್ದು, ಜಪಾನ್‌ನ ಭಾರತೀಯ ರಾಯಭಾರಿ ಸಿಬಿ ಜಾರ್ಜ್ ಅವರನ್ನು ಭೇಟಿ ಮಾಡಿತು.

ಜಪಾನ್‌ಗೆ ಬಂದ ನಂತರ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಸಂಸದ ಸಂಜಯ್ ಕುಮಾರ್ ಝಾ ಅವರು ಗಡಿಯಾಚೆಗಿನ ಭಯೋತ್ಪಾದನೆಯ ವಿರುದ್ಧ ಭಾರತದ ನಿಲುವಿನಲ್ಲಿ ನಿಯೋಗವು ನಿರಂತರ ಬೆಂಬಲವನ್ನು ಬಯಸುತ್ತಿದೆ ಎಂದು ಹೇಳಿದ್ದಾರೆ.

ಶಿವಸೇನಾ ಸಂಸದ ಶ್ರೀಕಾಂತ್ ಶಿಂಧೆ ನೇತೃತ್ವದ ಮತ್ತೊಂದು ನಿಯೋಗ ಯುಎಇಗೆ ತಲುಪಿದೆ. ಎಲ್ಲಾ ರೀತಿಯ ಭಯೋತ್ಪಾದನೆಯನ್ನು ಎದುರಿಸುವ ನವದೆಹಲಿಯ ಸಂಕಲ್ಪವನ್ನು ದೃಢೀಕರಿಸಲು ನಿಯೋಗವು ಲೈಬೀರಿಯಾ, ಕಾಂಗೋ ಮತ್ತು ಸಿಯೆರಾ ಲಿಯೋನ್‌ಗೆ ಭೇಟಿ ನೀಡಲಿದೆ. ಭಯೋತ್ಪಾದನೆಯ ವಿರುದ್ಧ ಶೂನ್ಯ ಸಹಿಷ್ಣುತೆಯ ಬಲವಾದ ಭಾರತದ ಸಂದೇಶವನ್ನು ನಿಯೋಗಗಳು ವಿಶದಪಡಿಸಲಿವೆ.

<><><>

ಜಮ್ಮು ಮತ್ತು ಕಾಶ್ಮೀರದ ಕಿಶ್ತ್ವಾರ್ ಜಿಲ್ಲೆಯ ಸಿಂಗ್ಪೋರಾ ಚತ್ರೂ ಅರಣ್ಯ ಪ್ರದೇಶದಲ್ಲಿ ಇಂದು ಬೆಳಿಗ್ಗೆ ಭದ್ರತಾ ಪಡೆಗಳು ಮತ್ತು ಭಯೋತ್ಪಾದಕರ ನಡುವೆ ಗುಂಡಿನ ಚಕಮಕಿ ನಡೆದಿದೆ.

ಆಕಾಶವಾಣಿ ಜಮ್ಮು ವರದಿಗಾರರ ವರದಿಯ ಪ್ರಕಾರ, ನಿರ್ದಿಷ್ಟ ಮಾಹಿತಿಯ ಮೇರೆಗೆ ಶಾರಿ ಮತ್ತು ಮಂದ್ರಲ್ ಧೋಕ್ ಪ್ರದೇಶದ ನಡುವಿನ ಅರಣ್ಯ ಪ್ರದೇಶದಲ್ಲಿ ಪೊಲೀಸ್ ಮತ್ತು ಸೇನೆಯ ಜಂಟಿ ತಂಡವು ಸುತ್ತುವರಿದು ಶೋಧ ಕಾರ್ಯಾಚರಣೆಯನ್ನು ಪ್ರಾರಂಭಿಸಿದ ನಂತರ ಭಯೋತ್ಪಾದಕರೊಂದಿಗೆ ಸಂಪರ್ಕವನ್ನು ಸ್ಥಾಪಿಸಲಾಗಿದೆ.

ನಡೆಯುತ್ತಿರುವ ಕಾರ್ಯಾಚರಣೆಯ ಸಮಯದಲ್ಲಿ, ಭೀಕರ ಗುಂಡಿನ ಚಕಮಕಿ ಮುಂದುವರೆದಿದೆ. ಕಾರ್ಯಾಚರಣೆಯಲ್ಲಿ ಒಬ್ಬ ಸೇನಾ ಯೋಧ ಪ್ರಾಣ ಕಳೆದುಕೊಂಡಿದ್ದಾರೆ. ಎರಡರಿಂದ ಮೂರು ಭಯೋತ್ಪಾದಕರು ಕಾಡಿನಲ್ಲಿ ಸಿಲುಕಿಕೊಂಡಿದ್ದಾರೆ ಎಂದು ನಂಬಲಾಗಿದೆ.

<><><><>

ಸರ್ಕಾರ ಇಂದು ೨೦೨೫ರ ವಿಶ್ವ ಪರಿಸರ ದಿನಾಚರಣೆಗೆ ಮುನ್ನ 'ಒಂದು ರಾಷ್ಟ್ರ, ಒಂದು ಅಭಿಯಾನ; ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸಿ' ಎಂಬ ರಾಷ್ಟ್ರವ್ಯಾಪಿ ಸಾಮೂಹಿಕ ಸಂಚಲನ ಅಭಿಯಾನವನ್ನು ಪ್ರಾರಂಭಿಸಿದೆ.

ಕೇಂದ್ರ ಪರಿಸರ, ಅರಣ್ಯ ಮತ್ತು ಹವಾಮಾನ ಬದಲಾವಣೆ ಸಚಿವ ಭೂಪೇಂದರ್ ಯಾದವ್ ಅವರು ತಮ್ಮ ಸಾಮಾಜಿಕ ಮಾಧ್ಯಮ ವೇದಿಕೆಯಲ್ಲಿ ಪ್ರಚಾರ ಪೂರ್ವ ವೀಡಿಯೊವನ್ನು ಬಿಡುಗಡೆ ಮಾಡುತ್ತಾ, ಪ್ಲಾಸ್ಟಿಕ್ ಮಾಲಿನ್ಯವನ್ನು ಕೊನೆಗೊಳಿಸಲು ಸುಸ್ಥಿರ ಜೀವನವನ್ನು ಅಳವಡಿಸಿಕೊಳ್ಳುವ ಮೂಲಕ ಎಲ್ಲರೂ ಜಾಗೃತಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಒತ್ತಾಯಿಸಿದರು.

ಈ ಅಭಿಯಾನವು ಭಾರತದ ಪ್ರಮುಖ ಉಪಕ್ರಮ-ಪರಿಸರಕ್ಕಾಗಿ ಜೀವನಶೈಲಿಗೆ ಅನುಗುಣವಾಗಿ ಪರಿಸರ ಸಂರಕ್ಷಣೆ ಮತ್ತು ಸುಸ್ಥಿರತೆಗೆ ಭಾರತದ ಅಚಲ ಬದ್ಧತೆಯನ್ನು ಎತ್ತಿ ತೋರಿಸುತ್ತದೆ ಎಂದು ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ.

<><><><>

ಭಾರತವು ಸುಸ್ಥಿರ ನಗರ ಚಲನಶೀಲತೆಯತ್ತ ದಿಟ್ಟ ಹೆಜ್ಜೆಗಳನ್ನು ಇಡುತ್ತಿದೆ ಎಂದು ಹೇಳಿದರು. ಸರ್ಕಾರವು ಕೇವಲ ವಿದ್ಯುತ್ ಬಸ್‌ಗಳನ್ನು ಹಂಚಿಕೆ ಮಾಡುತ್ತಿಲ್ಲ, ಬದಲಾಗಿ ನಾವೀನ್ಯತೆ ಮತ್ತು ಪರಿಸರ ಪ್ರಜ್ಞೆಯೊಂದಿಗೆ ಭಾರತದ ಸಾರಿಗೆ ವ್ಯವಸ್ಥೆಯ ಭವಿಷ್ಯವನ್ನು ರೂಪಿಸುತ್ತಿದೆ ಎಂದು ಕೇಂದ್ರ ಬೃಹತ್ ಕೈಗಾರಿಕಾ ಸಚಿವ ಎಚ್.ಡಿ. ಕುಮಾರಸ್ವಾಮಿ ಹೇಳಿದರು.

ನವದೆಹಲಿಯಲ್ಲಿ ಪ್ರಧಾನ ಮಂತ್ರಿ ಇ-ಡ್ರೈವ್ ಯೋಜನೆಯಡಿಯಲ್ಲಿ ವಿದ್ಯುತ್ ಬಸ್‌ಗಳನ್ನು ಬಿಡುಗಡೆ ಸಭೆಯ ಅಧ್ಯಕ್ಷತೆಯನ್ನು ವಹಿಸಿದ್ದ ಅವರು, ದೇಶದ ಸುಸ್ಥಿರ ಸಾರಿಗೆ ದೃಷ್ಟಿಕೋನವನ್ನು ಬಲಪಡಿಸುವಲ್ಲಿ ಕೇಂದ್ರ-ರಾಜ್ಯ ಸಿನರ್ಜಿಯ ಮಹತ್ವವನ್ನು ಕೇಂದ್ರ ಸಚಿವರು ಮತ್ತಷ್ಟು ಒತ್ತಿ ಹೇಳಿದರು.

ಪ್ರಾಥಮಿಕವಾಗಿ ತೆಲಂಗಾಣ, ಕರ್ನಾಟಕ, ದೆಹಲಿ ಮತ್ತು ಗುಜರಾತ್ ರಾಜ್ಯಗಳ ಕೇಂದ್ರೀಕರಿಸಿದ್ದು, ಪ್ರಧಾನ ಮಂತ್ರಿ ಇ-ಡ್ರೈವ್ ಯೋಜನೆಯ ಅಡಿಯಲ್ಲಿ ಬೆಂಗಳೂರಿಗೆ ಸುಮಾರು ೧ ಸಾವಿರದ ೫೦೦ ವಿದ್ಯುತ್ ಬಸ್‌ಗಳನ್ನು, ಹೈದರಾಬಾದ್‌ಗೆ ೨ ಸಾವಿರ, ದೆಹಲಿಗೆ ೨ ಸಾವಿರ ೮೦೦, ಅಹಮದಾಬಾದ್‌ಗೆ ೧ ಸಾವಿರ ಮತ್ತು ಸೂರತ್‌ಗೆ ೬೦೦ ಬಸ್‌ಗಳನ್ನು ಪ್ರಸ್ತುತ ಹಂತದಲ್ಲಿ ಒದಗಿಸಲಾಗುವುದು ಎಂದು ಬೃಹತ್ ಕೈಗಾರಿಕಾ ಸಚಿವಾಲಯ ತಿಳಿಸಿದೆ.

<><><><>